# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : | 1417 |
| ಸದಸ್ಯರ ಹೆಸರು : | ಶ್ರೀ ಕೆ.ಸಿ. ಕೊಂಡಯ್ಯ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ : | 23-03-2021 |
| ಉತ್ತರಿಸುವವರು : | ಪೌರಾಡಳಿತ ಮತ್ತು ಸಕ್ಕರೆ ಸಚಿವರು |

| ಕ್ರ.ಸ | ಪ್ರಶ್ನೆ | ಉತ್ತರ |
|---|---|---|
| ಅ) | ಪೌರಾಡಳಿತ ಇಲಾಖೆ ಯಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಕಳೆದ ಎಷ್ಟು ವರ್ಷ ಗಳಿಂದ ಈ ಹುದ್ದೆಗಳು ಖಾಲಿ ಇವೆ: | ಪೌರಾಡಳಿತ ಇಲಾಖೆಯಲ್ಲಿ ಪ್ರಸ್ತುತ 9972 ಹುದ್ದೆಗಳು ಖಾಲಿ ಇರುತ್ತದೆ.<br>ಮೇಲ್ದರ್ಜೆಗೇರಿಸಿದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸೃಜನೆಯಾದ ಹುದ್ದೆಗಳಿಂದ ಹಾಗೂ ಸ್ಥಳೀಯ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅಧಿಕಾರಿ/ನೌಕರರ ವರ್ಗಾವಣೆ, ಮುಂಬಡ್ತಿ, ನಿವೃತ್ತಿ ಹಾಗೂ ಇತರೆ ಕಾರಣಗಳಿಂದ ಕಾಲಕಾಲಕ್ಕೆ ಹುದ್ದೆಗಳು ಖಾಲಿಯಾಗಿರುತ್ತದೆ. |
| ಆ) | ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಕೈಗೊಂಡಿರುವ ಕ್ರಮ ಗಳೇನು? | ರಾಜ್ಯದ ನಗರ ಸ್ಥಳೀಯ ಸಂಸ್ಥೆಗಳಲ್ಲಿ ನೇರ ನೇಮಕಾತಿ ಅಡಿಯಲ್ಲಿ ಖಾಲಿ ಇರುವ ಗ್ರೂಪ್ ಬಿ ವೃಂದದ 4 ಹುದ್ದೆಗಳು ಮತ್ತು ಗ್ರೂಪ್ ಸಿ ವೃಂದದ 526 ಹುದ್ದೆಗಳನ್ನು ಒಳಗೊಂಡಂತೆ ಒಟ್ಟು 530 ಹುದ್ದೆಗಳನ್ನು ಭರ್ತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗದಲ್ಲಿ ನೇಮಕಾತಿ ಪ್ರಕ್ರಿಯೆಯಲ್ಲಿರುತ್ತದೆ. ಸದರಿ ಹುದ್ದೆಗಳ ಪೈಕಿ ಕರ್ನಾಟಕ ಲೋಕಸೇವಾ ಆಯೋಗದಿಂದ ಒಟ್ಟು 109 ಹುದ್ದೆಗಳಿಗೆ ಅಧಿಸೂಚನೆ ಹೊರಡಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: 126 ಟಿಎಂಎಸ್ 2016 ದಿನಾಂಕ: 04.12.2017ರಲ್ಲಿ ಪೌರಕಾರ್ಮಿಕರನ್ನು ಒಂದು ಬಾರಿಗೆ ವಿಶೇಷ ನೇಮಕಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿರುತ್ತದೆ. ಅದರಂತೆ 2137 ಪೌರಕಾರ್ಮಿಕರನ್ನು ವಿಶೇಷ ನೇಮಕಾತಿ ಮೂಲಕ ಜಿಲ್ಲಾಧಿಕಾರಿಗಳ ಹಂತದಲ್ಲಿ ಭರ್ತಿ ಮಾಡಲಾಗಿರುತ್ತದೆ.<br><br>**ಮುಂಬಡ್ತಿ ಕೋಟಾದಡಿ ಗ್ರೂಪ್-ಎ** ವೃಂದದ ಹುದ್ದೆಗಳಲ್ಲಿ ಖಾಲಿಯಾಗುವ ಹುದ್ದೆಗಳನ್ನು ಸರ್ಕಾರದ ಹಂತದಲ್ಲಿ ಹಾಗೂ **ಗ್ರೂಪ್-ಬಿ ಮತ್ತು 'ಸಿ' ವೃಂದದ** ಹುದ್ದೆಗಳಲ್ಲಿ ಖಾಲಿಯಾಗುವ ಹುದ್ದೆಗಳನ್ನು ಪೌರಾಡಳಿತ ನಿರ್ದೇಶನಾಲಯದ ಹಂತದಲ್ಲಿ ಕಾಲಕಾಲಕ್ಕೆ ಭರ್ತಿ ಮಾಡಲು ಕ್ರಮವಹಿಸಲಾಗುತ್ತಿದೆ.<br><br>ಜಿಲ್ಲಾ ಮಟ್ಟದಲ್ಲಿ ಮುಂಬಡ್ತಿ ಕೋಟಾದಡಿಯಲ್ಲಿ ಭರ್ತಿ ಮಾಡಲಾಗುವ ವಿವಿಧ "ಸಿ" ವೃಂದದ ಖಾಲಿ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡುವಂತೆ ಸಂಬಂಧಪಟ್ಟ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ. |

ಸಂಖ್ಯೆ: ನಅಇ 41 ಜಿಇಎಲ್ 2021

(ಎನ್.ನಾಗರಾಜು, ಎಂ.ಟಿ.ಬಿ)
ಪೌರಾಡಳಿತ ಮತ್ತು ಸಕ್ಕರೆ ಸಚಿವರು